# ಕರ್ನಾಟಕ ವಿಧಾನ ಪರಿಷತ್ತು
## ನೂರ ಇಪ್ಪತ್ತೇಳನೆಯ ಅಧಿವೇಶನ
## ಕಾರ್ಯಕಲಾಪಗಳ ಪಟ್ಟಿ
## ಶುಕ್ರವಾರ, ದಿನಾಂಕ: 13ನೇ ಫೆಬ್ರವರಿ, 2015
## (ಸಮಯ: ಬೆಳಗ್ಗೆ 10.00 ಗಂಟೆಗೆ)

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:-**

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್, 2014ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ (ಹಣಕಾಸು ಲೆಕ್ಕಪತ್ರಗಳು ಭಾಗ-01 ಮತ್ತು 02) ವರದಿಗಳನ್ನು ಸಭೆಯ ಮುಂದಿಡುವುದು.

ಆ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್, 2014ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ (ರಾಜಸ್ವ ವಿಭಾಗ ಮೇಲಿನ ವರದಿ) ವರದಿಯನ್ನು ಸಭೆಯ ಮುಂದಿಡುವುದು.

ಇ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್, 2014ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ (ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ವರದಿ) ವರದಿಯನ್ನು ಸಭೆಯ ಮುಂದಿಡುವುದು.

ಈ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್, 2014ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ (ಲೇಖಾನುದಾನ ಲೆಕ್ಕಪತ್ರಗಳು) ವರದಿಯನ್ನು ಸಭೆಯ ಮುಂದಿಡುವುದು.

ಉ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್, 2014ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ (ಆರ್ಥಿಕ ವಲಯ) ವರದಿಯನ್ನು ಸಭೆಯ ಮುಂದಿಡುವುದು.

## ೦3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2015ನೇ ಫೆಬ್ರವರಿ, 02ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ: 04.02.2015ರಂದು ಡಾ: ಮತ್ತಿಕಟ್ಟಿ ವೀರಣ್ಣರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ.

(ಐದನೇ ದಿನ)

## ೦4. ಖಾಸಗಿ ಸದಸ್ಯರ ಕಾರ್ಯಕಲಾಪಗಳು

### ಅ.ಖಾಸಗಿ ವಿಧೇಯಕವನ್ನು ಪರ್ಯಾಲೋಚಿಸುವುದು

**ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಪರಿಚ್ಛೇದ 95ಕ್ಕೆ ತಿದ್ದುಪಡಿ ತರುವುದಕ್ಕಾಗಿ ವಿಧೇಯಕ, 2014:-**

ದಿನಾಂಕ: 30.07.2014ರಂದು ಶ್ರೀ ಸಿ.ಹೆಚ್. ವಿಜಯಶಂಕರ ಅವರು ಮಂಡಿಸಿದ 2014ನೇ ಸಾಲಿನ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಪರಿಚ್ಛೇದ 95ಕ್ಕೆ ತಿದ್ದುಪಡಿ ತರುವುದಕ್ಕಾಗಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸಿದ ಖಾಸಗಿ ಸದಸ್ಯರ ವಿಧೇಯಕದ ಮೇಲೆ ಮುಂದುವರೆದ ಚರ್ಚೆ.

### ಆ. ಖಾಸಗಿ ಸದಸ್ಯರ ನಿರ್ಣಯ

ಶ್ರೀಮತಿ ತಾರಾಅನೂರಾಧ ಅವರು "ರಾಜ್ಯದಲ್ಲಿ ಮಂಗಳಮುಖಿಯರ ಹಿತರಕ್ಷಣೆ ಕಾಪಾಡಲು, ಮಂಗಳಮುಖಿಯರನ್ನು ಅಂಗವಿಕಲರು/ ವಿಕಲಚೇತನರೆಂದು ಪರಿಗಣಿಸಿ, ಸರ್ಕಾರಿ ಉದ್ಯೋಗದಲ್ಲಿ ವಿಕಲಚೇತನರ ಮೀಸಲಾತಿ ಪಟ್ಟಿಯಲ್ಲಿ ಸೇರ್ಪಡೆ ಮಾಡಿ, ಉದ್ಯೋಗದಲ್ಲಿ ಮೀಸಲಾತಿ ಸೌಲಭ್ಯ ಒದಗಿಸಬೇಕು, 'ಮಂಗಳಮುಖಿ/ಲೈಂಗಿಕ ಅಲ್ಪಸಂಖ್ಯಾತ'ರನ್ನು 'ಅಲ್ಪಸಂಖ್ಯಾತ'ರೆಂದು ಪರಿಗಣಿಸಿ, ರಾಜ್ಯದಲ್ಲಿ ಅಲ್ಪಸಂಖ್ಯಾತರಿಗಾಗಿ ಸರ್ಕಾರ ಒದಗಿಸುತ್ತಿರುವ ಮೀಸಲಾತಿ ಸವಲತ್ತು, ರಕ್ಷಣೆ ಇತ್ಯಾದಿ ಕಲ್ಯಾಣ ಕಾರ್ಯಕ್ರಮಗಳನ್ನು ಒದಗಿಸುವ ಬಗ್ಗೆ" ದಿನಾಂಕ: 06.02.2015ರಂದು ಮಂಡಿಸಿದ ಖಾಸಗಿ ನಿರ್ಣಯದ ಮೇಲೆ ಮುಂದುವರೆದ ಚರ್ಚೆ.

### ಭೋಜನ ವಿರಾಮದ ನಂತರ

## ೦5. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2015ನೇ ಫೆಬ್ರವರಿ, 02ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ: 04.02.2015ರಂದು ಡಾ: ಮತ್ತಿಕಟ್ಟಿ ವೀರಣ್ಣರವರು ಸೂಚಿಸಿದ ಪ್ರಸ್ತಾವದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ.

**ವಿ. ಶ್ರೀಶ್**
**ಕಾರ್ಯದರ್ಶಿ**

---